# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 720(662) |
| **ಸದಸ್ಯರ ಹೆಸರು** | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 19.09.2022 |
| **ಉತ್ತರಿಸುವ ಸಚಿವರು** | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಪ್ರದೇಶದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿವೃತ್ತಿಯಿಂದ ಖಾಲಿ ಇರುವ ಶಿಕ್ಷಕ/ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ನೇಮಕಾತಿ ಆದೇಶ ಹೊರಡಿಸುವುದು ಯಾವಾಗ; | ಕಲ್ಯಾಣ ಕರ್ನಾಟಕದ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015ರವರೆಗೆ ನಿಧನ, ನಿವೃತ್ತಿ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದ ಒಟ್ಟು:365 ಬೋಧಕ ಹುದ್ದೆಗಳನ್ನು ಹಾಗೂ ಅನುದಾನಿತ ಪದವಿಪೂರ್ವ.ಕಾಲೇಜುಗಳಲ್ಲಿ ಒಟ್ಟು:147 ಬೋಧಕ ಹುದ್ದೆಗಳನ್ನು ದಿನಾಂಕ:30.06.2022 ಮತ್ತು 30.07.2022ರ ಪತ್ರಗಳಲ್ಲಿ ಅನುಮತಿ ನೀಡಲಾಗಿದೆ. |
| ಆ) | ಬೇರೆ ಜಿಲ್ಲೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಕಲ್ಯಾಣ ಕರ್ನಾಟಕ ಪ್ರದೇಶವನ್ನು ನಿರ್ಲಕ್ಷ್ಯ ಮಾಡಿರುವುದಕ್ಕೆ ಕಾರಣವೇನು; | ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರವರೆಗೆ ನಿಧನ, ನಿವೃತ್ತಿ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>ಅನುದಾನಿತ ಪದವಿಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ನಿಗಧಿತ ಕಾರ್ಯಭಾರ ಹೊಂದಿರುವ ಹುದ್ದೆಗಳಿಗೆ ಮಾತ್ರ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಆಡಳಿತ ಮಂಡಳಿಯವರು ಕಾರ್ಯಭಾರವನ್ನು ಸರಿದೂಗಿಸಿಕೊಂಡು ಪ್ರಸ್ತಾವನೆ ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತಿದೆ. |
| ಇ) | ಇಂತಹ ಎಷ್ಟು ಬೇಡಿಕೆಗಳು ಸರ್ಕಾರದ ಮುಂದೆ ಇವೆ? (ಇದರ ಸಮಗ್ರ ಮಾಹಿತಿ ನೀಡುವುದು) | ದಿನಾಂಕ:01.01.2016 ರಿಂದ 31.12.2020ರವರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ನಿಧನ, ನಿವೃತ್ತಿ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದ 4521 ಹುದ್ದೆಗಳನ್ನು ಹಾಗೂ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 2159 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. |

ಇಪಿ 454 ಎಸ್ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ
ಸಚಿವರು